Akashvani : Bangalore
Regional Bulletin In Kannada
31.08.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಮುಡಾ ಪ್ರಕರಣ ; ಸೋಮವಾರಕ್ಕೆ ವಿಚಾರಣೆ ಮುಂದೂಡಿದ ಹೈಕೋರ್ಟ್
- ಹೆಚ್.ಡಿ. ಕುಮಾರಸ್ವಾಮಿ, ಜನಾರ್ಧನ ರೆಡ್ಡಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ರಾಜ್ಯಪಾಲರಿಗೆ ಕಾಂಗ್ರೆಸ್ ಮನವಿ
- ಚೆನ್ನಪಟ್ಟಣ ಉಪಚುನಾವಣೆಗೆ ಇನ್ನೆರಡು ದಿನಗಳಲ್ಲಿ ಬಿಜೆಪಿ ಅಭ್ಯರ್ಥಿ ಹೆಸರು ಅಂತಿಮ - ಪ್ರಲ್ಹಾದ್ ಜೋಶಿ
- ಕೆಪಿಎಸ್‌ಸಿ ಪೂರ್ವಭಾವಿ ಪರೀಕ್ಷೆ ಕೀ ಉತ್ತರ ಪ್ರಕಟ ; ಆಕ್ಷೇಪಣೆ ಸಲ್ಲಿಸಲು ಆಯೋಗ ಅವಕಾಶ

**<><*<><>*><>**

ಮುಡಾ ಪ್ರಕರಣದಲ್ಲಿ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿ ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿದ ರಿಟ್ ಅರ್ಜಿಯನ್ನು ಹೈಕೋರ್ಟ್ ಸೋಮವಾರಕ್ಕೆ ಮುಂದೂಡಿದೆ. ರಾಜ್ಯಪಾಲರ ಪರ ಇಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದ ಮಂಡಿಸಿದರು. ಮೂರು ದೂರಿನಲ್ಲಿ ಒಂದೇ ಆರೋಪವಿದ್ದು, ಶೋಕಾಸ್ ನೋಟಿಸ್ ನೀಡುವ ಅಗತ್ಯವಿಲ್ಲ ಎಂದು ವಾದಿಸಿದರು. ದೂರುದಾರ ಸ್ನೇಹಮಯಿ ಕೃಷ್ಣ ಪರ ಮಣಿಂದರ್ ಸಿಂಗ್ ವಾದ ಮಂಡಿಸಿ ಪ್ರಕರಣದ ಕುರಿತು ಸ್ವತಂತ್ರತನಿಖೆ ನಡೆಸುವಂತೆ ಮನವಿ ಮಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಇಂದು ವಕೀಲ ರವೀಕುಮಾರ್ ವಾದ ಮಂಡಿಸಿದರು. ವಾದ-ಪ್ರತಿವಾದ ಆಲಿಸಿದ ಹೈಕೋರ್ಟ್ ಏಕಸದಸ್ಯ ಪೀಠ ಸೋಮವಾರ ಮಧ್ಯಾಹ್ನಕ್ಕೆ ವಿಚಾರಣೆ ಮುಂದೂಡಿದೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಹಾಗೂ ರಾಜ್ಯಪಾಲರು ತಮ್ಮ ಮುಂದೆ ಬಾಕಿಯಿರುವ ಇತರೆ ಪ್ರಕರಣಗಳ ವಿಚಾರಣೆಗೆ ಅನುಮತಿ ನೀಡುವಂತೆ ಒತ್ತಾಯಿಸಿ ಕಾಂಗ್ರೆಸ್ ಬೆಂಗಳೂರಿನಲ್ಲಿಂದು ರಾಜಭವನ ಚಲೋ ನಡೆಸುವ ಮೂಲಕ ಪ್ರತಿಭಟನೆ ನಡೆಸಿತು. ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ನಿಯೋಗ ನಡೆಸಿದ ರಾಜಭವನ ಚಲೋ ಪ್ರತಿಭಟನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಪರಮೇಶ್ವರ್, ಪ್ರಿಯಾಂಕ್ ಖರ್ಗೆ, ಹೆಚ್.ಕೆ ಪಾಟೀಲ್ ಸೇರಿದಂತೆ ಎಲ್ಲಾ ಸಚಿವರು ಶಾಸಕರು, ಸಂಸದರು, ವಿಧಾನಪರಿಷತ್ ಸದಸ್ಯರು ಭಾಗವಹಿಸಿದ್ದರು. ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ಮುರುಗೇಶ್ ನಿರಾಣಿ, ಜನಾರ್ದನ ರೆಡ್ಡಿ ವಿರುದ್ಧವೂ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡುವಂತೆ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು. ಬಳಿಕ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜಭವನ ರಾಜಕೀಯ ಭವನವಾಗಬಾರದು. ಇಡೀ ಸರ್ಕಾರವೇ ಮುಖ್ಯಮಂತ್ರಿ

ಸಿದ್ದರಾಮಯ್ಯ ಅವರ ಬೆಂಬಲಕ್ಕೆ ನಿಂತಿದೆ ಎಂದು ತಿಳಿಸಿದರು. ಇದಕ್ಕೂ ಮೊದಲು ಕಾಂಗ್ರೆಸ್ ನಾಯಕರು ವಿಧಾನಸೌಧದ ಬಳಿ ಗಾಂಧಿ ಪ್ರತಿಮೆಯ ಮುಂದೆ ಪ್ರತಿಭಟನೆ ನಡೆಸಿದರು.

<><*<><>*><>

ಆಡಳಿತ ನಡೆಸುವ ಸರ್ಕಾರವೇ ಪ್ರತಿಭಟನೆ ನಡೆಸುತ್ತಿದೆ ಎಂದರೆ ಇದು ಸರ್ಕಾರದ ಸಂಪೂರ್ಣ ವೈಫಲ್ಯ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರ ದುರುಪಯೋಗಪಡಿಸಿಕೊಳ್ಳುತ್ತಿದ್ದು ವಿಧಾನಸೌಧವನ್ನು ಕಾಂಗ್ರೆಸ್ ಕಚೇರಿ ಮಾಡಿಕೊಳ್ಳಲಾಗಿದೆ ಎಂದು ದೂರಿದ್ದಾರೆ. ರಾಜ್ಯಪಾಲರು ಪರಿಶೀಲಿಸಿ ತನಿಖೆಗೆ ಅನುಮತಿ ನೀಡಿದ್ದಾರೆ. ಈ ಹಿಂದೆ ಬಿ.ಎಸ್.ಯಡಿಯೂರಪ್ಪ, ಜನಾರ್ದನ ರೆಡ್ಡಿ ಅವರ ವಿರುದ್ಧದ ತನಿಖೆಗೂ ಆಗಿನ ರಾಜ್ಯಪಾಲರು ಅನುಮತಿ ನೀಡಿದ್ದರು. ಆಗ ರಾಜಭವನ ಕಾಂಗ್ರೆಸ್ ಕಚೇರಿಯಾಗಿತ್ತೇ ಎಂದು ಅಶೋಕ ಪ್ರಶ್ನಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಮಳೆಯಿಂದಾಗಿ ಜನ ಸಾಮಾನ್ಯರಿಗೆ ಸಮಸ್ಯೆ ಉಂಟಾಗಿದ್ದು, ರಾಜ್ಯ ಸರ್ಕಾರ ನಿರ್ಲಕ್ಷ್ಯ ವಹಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಭವನ ಚಲೋ ಅಕ್ಷಮ್ಯ ಅಪರಾಧ ಎಂದು ತಿಳಿಸಿದ್ದಾರೆ. ಚನ್ನಪಟ್ಟಣ ಉಪಚುನಾವಣೆಗೆ ಇನ್ನೆರಡು ದಿನಗಳಲ್ಲಿ ದಿನಾಂಕ ಅಂತಿಮವಾಗಲಿದ್ದು, ಆ ಬಳಿಕ ಅಭ್ಯರ್ಥಿಗಳ ಹೆಸರು ಅಂತಿಮಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ಕೇಂದ್ರ ಸರ್ಕಾರ ಉದ್ದು ಮತ್ತು ಸೋಯಾಬಿನ್ ಖರೀದಿ ಮಾಡಲು ರಾಜ್ಯ ಸರ್ಕಾರಕ್ಕೆ ಅನುಮತಿ ನೀಡಿದೆ ಎಂದು ತಿಳಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಇಂದು ಬೆಂಗಳೂರು-ಮಧುರೈ ಸೇರಿದಂತೆ ಮೂರು ಹೊಸ 'ವಂದೇ ಭಾರತ್' ರೈಲುಗಳಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಚಾಲನೆ ನೀಡಿದರು. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತಿತರರು ಭಾಗವಹಿಸಿದ್ದರು. ಬೆಂಗಳೂರು-ಮಧುರೈ ಎಕ್ಸ್‌ಪ್ರೆಸ್ ರೈಲು ಎರಡು ನಿಲ್ದಾಣಗಳ ನಡುವೆ ಸಂಚರಿಸುವವರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಮಧುರೈ ಮತ್ತು ಬೆಂಗಳೂರು ನಡುವಿನ ವಂದೇ ಭಾರತ್ ರೈಲು ಸೇವೆಯ ಉದ್ಘಾಟನಾ ಕಾರ್ಯಕ್ರಮದ ನಂತರ ಮಾಧ್ಯಮ ಸಂವಾದ ನಡೆಸಿದ ಅವರು, ಕೇಂದ್ರ ಸರ್ಕಾರವು ರಾಜ್ಯದಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಯೋಜನೆಗಳನ್ನು ಮಂಜೂರು ಮಾಡುತ್ತಿದೆ. ರಾಜ್ಯದಲ್ಲಿ ರೈಲು ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಯಾವುದೇ ತಾರತಮ್ಯ ಮಾಡುತ್ತಿಲ್ಲ ಎಂದು ಹೇಳಿದರು.

<><*<><>*><>

ಕರ್ನಾಟಕ ಅರಣ್ಯ ಇಲಾಖೆಯ ವತಿಯಿಂದ ೨೦೨೨- ಹಾಗೂ ೨೦೨೩ನೇ ಸಾಲಿನ ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಯಲ್ಲಿ ಉತ್ತಮ ಸಾಧನೆಗೈದ ಅರಣ್ಯ ಇಲಾಖೆಯ ಮುಂಚೂಣಿ ಅಧಿಕಾರಿ ಹಾಗೂ

ಸಿಬ್ಬಂದಿಗಳಿಗೆ ಮುಖ್ಯಮಂತ್ರಿಗಳ ಪದಕ ಪ್ರದಾನ ಸಮಾರಂಭವನ್ನು ಸೆಪ್ಟೆಂಬರ್ ೦೩ರ ಸಂಜೆ ೪.೦೦ ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯ ಸಚಿವರಾದ ಈಶ್ವರ್ ಬಿ. ಖಂಡ್ರೆ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಕರಕುಶಲ ಮತ್ತು ಕುಶಲಕರ್ಮಿಗಳ ಅಭಿವೃದ್ಧಿಗೆ ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯ ಪಾತ್ರ ಮಹತ್ವದಾಗಿದೆ ಎಂದು ಉಡುಪಿ-ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದ್ದಾರೆ. ಚಿಕ್ಕಮಗಳೂರಿನಲ್ಲಿ ಇಂದು ನಡೆದ ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದ ಅವರು ಈ ಯೋಜನೆಯಡಿಯಲ್ಲಿ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಸಾಲ ಮಂಜೂರು ಮಾಡಲು ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಈ ಯೋಜನೆಯನ್ನು ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿನ ಕರಕುಶಲ ಮತ್ತು ಕುಶಲ ಕರ್ಮಿಗಳನ್ನು ಆರ್ಥಿಕವಾಗಿ ಬಲಪಡಿಸಿ ಅವರ ಸ್ವ ಉದ್ಯೋಗಕ್ಕೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಜಾರಿಗೆ ತರಲಾಗಿದೆ ಎಂದರು.

<><*<><>*><>

ಕರ್ನಾಟಕ ಲೋಕಸೇವಾ ಆಯೋಗದ ೨೦೨೩-೨೪ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ೩೮೪ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಆಗಸ್ಟ್ ೨೭ರಂದು ನಡೆಸಿದ ಪೂರ್ವಭಾವಿ ಪರೀಕ್ಷೆಯ ಪತ್ರಿಕೆ -೧ ಮತ್ತು ಪತ್ರಿಕೆ - ೨ರ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಕರ್ನಾಟಕ ಲೋಕಸೇವಾ ಆಯೋಗದ ಜಾಲತಾಣ kpsc.kar.nic.in ನಲ್ಲಿ ಪ್ರಕಟಿಸಲಾಗಿದೆ.

ಅಭ್ಯಥಿಗಳು ಸದರಿ ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಸೂಚನೆಗಳನ್ನು ಹಾಗೂ ನಮೂನೆಯ ಮಾದರಿಯನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಜಾಲತಾಣದಲ್ಲಿ ಪ್ರಕಟಿಸಿರುವ ಸೂಚನೆಗಳನ್ವಯ ನಿಗದಿತ ನಮೂನೆಯಲ್ಲಿಯೇ ಆಕ್ಷೇಪಣೆಗಳನ್ನು ಸಲ್ಲಿಸತಕ್ಕದ್ದು.

ಆಕ್ಷೇಪಣೆಗಳನ್ನು ಸೆಪ್ಟೆಂಬರ್ ೪ರ ಸಂಜೆ ೫.೩೦ ಗಂಟೆಯೊಳಗೆ ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು - ೫೬೦ ೦೦೧ ಇವರಿಗೆ ತಲುಪುವಂತೆ ಕಳುಹಿಸತಕ್ಕದ್ದು. ಅವಧಿಯ ನಂತರ ಸ್ವೀಕರಿಸಲಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ದೇವಸ್ಥಾನ, ಜಾತ್ರೆ, ಹಬ್ಬ ಮತ್ತಿತರ ಪೂಜಾ ಕಾರ್ಯಕ್ರಮಗಳಲ್ಲಿ ಭಕ್ತರಿಗೆ ವಿತರಿಸಲಾಗುವ ಪ್ರಸಾದ ತಯಾರಿಕೆಯಲ್ಲಿ ಕೃತಕ ಬಣ್ಣಗಳನ್ನು ಬಳಸಬಾರದು ಎಂದು ತುಮಕೂರು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ ನೀಡಿದ್ದಾರೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ-೨೦೦೬ರಡಿ

ದೇವಸ್ಥಾನ ಹಾಗೂ ಜಾತ್ರಾ ಮಹೋತ್ಸವಗಳಲ್ಲಿ ಪಾಲಿಸಬೇಕಾದ ಮಾನದಂಡಗಳ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇವಸ್ಥಾನ ಹಾಗೂ ಜಾತ್ರಾ ಮಹೋತ್ಸವ, ಹಬ್ಬ-ಹರಿದಿನಗಳಲ್ಲಿ ಪ್ರಸಾದ ವಿತರಿಸಲು ಆಹಾರ ತಯಾರಿಸುವವರು ಕಡ್ಡಾಯವಾಗಿ ಆಹಾರ ಪರವಾನಗಿ ಪಡೆದುಕೊಳ್ಳಬೇಕೆಂದು ತಿಳಿಸಿದ್ದಾರೆ. ಆಹಾರ ತಯಾರಿಸುವ ಜಾಗ ಶುಚಿತ್ವದಿಂದ ಕೂಡಿರಬೇಕು. ಆಹಾರ ತಯಾರಿಕೆಗೆ ಬಳಸುವ ಪದಾರ್ಥಗಳು ಎಫ್.ಎಸ್.ಎಸ್.ಎ ಲೈಸನ್ಸ್ ಪಡೆದಿದ್ದು, ಅವಧಿ ಮುಗಿದಿರುವ ಆಹಾರ ಪದಾರ್ಥಗಳನ್ನು ಯಾವುದೇ ಕಾರಣಕ್ಕೂ ಪ್ರಸಾದ ತಯಾರಿಕೆಯಲ್ಲಿ ಬಳಸಬಾರದು ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಉಡುಪಿಯಲ್ಲಿ ಜಿಲ್ಲಾ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರದಿಂದ ವಿಶೇಷ ಅಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಂಕಿತಾಧಿಕಾರಿಗಳ ಕಛೇರಿ ಪ್ರಕಟಣೆ ತಿಳಿಸಿದೆ. ಆಹಾರ ಉದ್ಯಮದಲ್ಲಿ ತೊಡಗಿಕೊಂಡಿರುವ ಹೋಟೆಲ್, ಬೇಕರಿ, ದಿನಸಿ ಅಂಗಡಿ, ಆಹಾರ ತಯಾರಕರು, ಆಹಾರ ಸರಬರಾಜುದಾರರು, ಆಹಾರ ಪದಾರ್ಥಗಳ ವಿತರಕರು ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಕಾಯ್ದೆ ಅಡಿ ಪರವಾನಿಗೆ ಅಥವಾ ನೋಂದಣಿ ಮಾಡಿಸುವುದು ಕಡ್ಡಾಯವಾಗಿರುತ್ತದೆ. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆಹಾರ ಉದ್ಯಮಿಗಳು ಆಹಾರದ ಸುರಕ್ಷತೆ ಮತ್ತು ಶುಚಿತ್ವ ಕಾಪಾಡಿಕೊಳ್ಳಬೇಕು. ಆಹಾರ ಸುರಕ್ಷತಾ ಕಾಯ್ದೆಯ ಮಾನದಂಡಗಳಿಗೆ ಮೀರಿ ಆಹಾರದಲ್ಲಿ ಕೃತಕ ಬಣ್ಣವನ್ನು ಬಳಸುವುದನ್ನು ನಿಷೇಧಿಸಲಾಗಿರುವುದರಿಂದ ಅದನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಮೊಟ್ಟೆ, ಮೀನು ಮತ್ತು ಮಾಂಸದ ಆಹಾರ ಪದಾರ್ಥಗಳನ್ನು ಸೂಕ್ತ ತಾಪಮಾನದಲ್ಲಿ ಸಂಗ್ರಹಿಸಿ, ಸುರಕ್ಷಿತವಾಗಿ ಮತ್ತು ಶುಚಿಯಾಗಿ ಗ್ರಾಹಕರಿಗೆ ನೀಡಬೇಕು ಎಂದು ಪ್ರಕಟಣೆಯಲ್ಲಿ ಸೂಚಿಸಲಾಗಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಜೂನ್ ತಿಂಗಳೊಂದರಲ್ಲಿಯೇ ವಿಶೇಷ ನ್ಯಾಯಾಲಯದ ಮುಂದೆ ಇದ್ದ ಹಲವು ಪ್ರಕರಣಗಳನ್ನು ಇತ್ಯರ್ಥ ಮಾಡುವ ಮೂಲಕ, ರಾಜ್ಯಾದ್ಯಂತ ಭೂ ಕಬಳಿಕೆಯಾಗಿದ್ದ ೨೨೪.೪ ಎಕರೆ ಒತ್ತುವರಿ ಜಮೀನನ್ನು ಮರಳಿ ಸರ್ಕಾರದ ಸುಪರ್ದಿಗೆ ವಹಿಸಿ ಆದೇಶ ನೀಡಲಾಗಿದೆ ಎಂದು ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ಅಧ್ಯಕ್ಷ ನ್ಯಾಯಮೂರ್ತಿ ಬಿ.ಎ. ಪಾಟೀಲ್ ಚಿತ್ರದುರ್ಗದಲ್ಲಿಂದು ಹೇಳಿದ್ದಾರೆ.

೨. ಸ್ಥಿರಾಸ್ತಿ ನೋಂದಣಿ ಪ್ರಕ್ರಿಯೆಯನ್ನು ಸರಳೀಕೃತಗೊಳಿಸುವ ಭಾಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಯಾವುದೇ ಕಚೇರಿಯಲ್ಲಿ ಸ್ಥಿರಾಸ್ತಿ ನೋಂದಣಿಗೆ ಅವಕಾಶ ಮಾಡಿಕೊಡಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು. ಕರಾವಳಿಯ ಬಹುತೇಕ ಸ್ಥಳಗಳಲ್ಲಿ ದಕ್ಷಿಣ ಒಳನಾಡಿನ ಹಲವು ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ.

ಧರ್ಮಸ್ಥಳ ೬, ಆಗುಂಬೆ ೫, ಭಾಗಮಂಡಲ, ಬೆಂಗಳೂರು ಹೆಚ್.ಎ.ಎಲ್. ವಿಮಾನ ನಿಲ್ದಾಣದಲ್ಲಿ ತಲಾ ೪ ಸೆಂಟಿ ಮೀಟರ್ ಮಳೆಯಾಗಿದೆ.

ಇಂದು ಕರಾವಳಿ ಜಿಲ್ಲೆಗಳಾದ ಉತ್ತರಕನ್ನಡ, ಉಡುಪಿ, ದಕ್ಷಿಣಕನ್ನಡ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕಲಬುಗರಿ, ಯಾದಗಿರಿ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳಲ್ಲೂ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರವಿದ್ದು, ಸಾಧಾರಣವಾಗಿ ಮಳೆಯಾಗುವ ಸಾಧ್ಯತೆಯಿದೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ೭.೩೫ ಕ್ಕೆ **<>*><>**